# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## -:ವಾರ್ಡ್-37ರ ವಾರ್ಡ್ ಸಮಿತಿ ಸಭೆಯ ನಡವಳಿಗಳು:-

**ದಿನಾಂಕ: 19.10.2021 ರಂದು ಬೆಳಿಗ್ಗೆ 11.00 ಗಂಟೆಗೆ ವಾರ್ಡ್ ನಂ.37 ಯಶವಂತಪುರ ವಾರ್ಡ್‌ನ, ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ನಂ.37ರ ವಾರ್ಡ್ ಕಛೇರಿ, ಮಾಡೆಲ್ ಕಾಲೋನಿ, 2ನೇ ಅಡ್ಡರಸ್ತೆಯ ಕಟ್ಟಡದಲ್ಲಿ ನಡೆಸಲಾಗಿದ್ದು, ಸದರಿ ಸಭೆಯ ಸಭಾ ನಡವಳಿಗಳು**

**ಸಭೆಗೆ ಹಾಜರಿದ್ದ ಮಾನ್ಯ ಸದಸ್ಯರು:-**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಹುದ್ದೆ | ಪದನಾಮ | ಹಾಜರಾತಿ |
|---|---|---|---|---|
| 1 | ಶ್ರೀ ಎಸ್. ಜಿ. ಉಮೇಶ್ | ಸ.ಕಾ.ನಿ.ಅ., | ಅಧ್ಯಕ್ಷರು/ ವಾರ್ಡ್ ನೋಡಲ್ ಅಧಿಕಾರಿ | ಹಾಜರಿದ್ದರು |
| 2 | ಎಸ್. ಜಿ. ಉಮೇಶ್ | ಸಹಾಯಕ ಅಭಿಯಂತರರು | ಸದಸ್ಯರು | ಹಾಜರಿದ್ದರು |
| 3 | ಡಾ|| ಹರ್ಷಿತ್ | ಕೋವಿಡ್ ವೈದ್ಯಾಧಿಕಾರಿಗಳು | ಸದಸ್ಯರು | ಹಾಜರಿದ್ದರು |
| 4 | ಸುಜಾತಾ | ಹಿರಿಯ ಆರೋಗ್ಯ ಪರಿವೀಕ್ಷಕರು | ಸದಸ್ಯರು | ಹಾಜರಿದ್ದರು |
| 5 | ಸುಜಾತಾ | ಲಿಂಕ್ ವರ್ಕರ್ | ಸದಸ್ಯರು | ಹಾಜರಿದ್ದರು |
| 6 | ಸತ್ಯವತಿ | ಲಿಂಕ್ ವರ್ಕರ್ | ಸದಸ್ಯರು | ಹಾಜರಿದ್ದರು |
| 7 | ಶಿವಪ್ರಕಾಶ್ ಎಂ. | ಬಿ.ಎಲ್.ಓ. ಹೋಂ ಐಸೋಲೇಷನ್ ಟೀಂ | ಸದಸ್ಯರು | ಹಾಜರಿದ್ದರು |
| 8 | ಮುರಳಿ | ಮೇಲ್ವಿಚಾರಕರು | ಸದಸ್ಯರು | ಹಾಜರಿದ್ದರು |
| 9 | ಬಿ. ಜಾನ್ | ಮೇಲ್ವಿಚಾರಕರು | ಸದಸ್ಯರು | ಹಾಜರಿದ್ದರು |

ವಾರ್ಡ್-37ರ ವಾರ್ಡ್ ಸಮಿತಿ ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರು ಮತ್ತು ಅಧಿಕಾರಿ ವರ್ಗದವರಿಗೆ ಕಾರ್ಯದರ್ಶಿಯವರು ಸ್ವಾಗತಿಸಿ ವಾರ್ಡ್ ಸಮಿತಿ ಸಭೆಯ ಮಾರ್ಗಸೂಚಿಗಳನ್ನು ಸಭೆಗೆ ಸ್ಥೂಲವಾಗಿ ವಿವರಿಸಿದರು.

ಮಾನ್ಯ ಅಧ್ಯಕ್ಷರು, ಸಭೆಯ ಸದಸ್ಯರುಗಳನ್ನು ಪರಸ್ಪರ ಪರಿಚಯ ಮಾಡಿಸಿ, ಮಾರ್ಗಸೂಚಿಯಂತೆ, ಈ ಕೆಳಗಿನ ವಿಷಯಗಳನ್ನು ಸಭೆಯ ಮುಂದಿಟ್ಟು ವಾರ್ಡ್ ಸಮಿತಿ ಸಭೆಯು ನಿರ್ವಹಿಸಬೇಕಾದ ಅಂಶಗಳನ್ನು ತಿಳಿಸಿ, ಅನುಸರಿಸಬೇಕಾದ ಕ್ರಮಗಳನ್ನು ಈ ಕೆಳಕಂಡಂತೆ ಕ್ರಮವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

**1) ಘನತ್ಯಾಜ್ಯ ನಿರ್ವಹಣೆ :**

ಕಸ ವಿಲೇವಾರಿ ಮೇಲ್ವಿಚಾರಕರು ಮಾತನಾಡಿ, ಕಾಂಪ್ಯಾಕ್ಟರ್ ಅನ್‌ಲೋಡ್ ಆಗಲು ವಿಳಂಬವಾಗುತ್ತಿದೆ. ಆದ್ದರಿಂದ ವಾರ್ಡ್‌ನಲ್ಲಿ ಕಸ ಸಂಗ್ರಹಣೆ ತುಂಬಾ ತೊಂದರೆಯಾಗುತ್ತಿದೆ ಎಂದು ತಿಳಿಸಿರುತ್ತಾರೆ. ವಾರ್ಡ್‌ನಲ್ಲಿ ಒಣ ಸಂಗ್ರಹಣ ಕೇಂದ್ರ ಇರುವುದಿಲ್ಲ ಇದರಿಂದಾಗಿ ಕಸ ವಿಂಗಡಣೆಗೆ ತೊಂದರೆಯಾಗುತ್ತಿದೆ ಎಂದು ಕಿರಿಯ ಆರೋಗ್ಯ ಪರಿವೀಕ್ಷಕರು ಮಾನ್ಯ ಅಧ್ಯಕ್ಷರಿಗೆ ತಿಳಿಸಿದರು. ಪೌರ ಕಾರ್ಮಿಕರಿಗೆ ಊಟ ಸರಿಯಾಗಿ ಸರಬರಾಜು ಆಗುತ್ತಿರುವುದಿಲ್ಲ ಎಂದು ಸಭೆಗೆ ತಿಳಿಸಿದರು. ಪ್ರಸ್ತಾಪಿತ ವಿಷಯದ ಬಗ್ಗೆ ಅಧ್ಯಕ್ಷರು ಮಾತನಾಡಿ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ) ರವರೊಂದಿಗೆ ಚರ್ಚಿಸುವುದಾಗಿ ತಿಳಿಸಿದರು.

**2. ಆರೋಗ್ಯ ಇಲಾಖೆ:**

ವಾರ್ಡ್‌ನಲ್ಲಿ ಕೋವಿಡ್ ಲಸಿಕೆ ಬಗ್ಗೆ ಮಾತನಾಡುತ್ತಾ, ಪ್ರಾಥಮಿಕ ಆರೋಗ್ಯ ಕೇಂದ್ರದ ಕೋವಿಡ್ ವೈದ್ಯಾಧಿಕಾರಿಗಳಾದ ಡಾ॥ ಹರ್ಷಿತ್ ರವರು ಮಾತನಾಡಿ, ಲಸಿಕೆಯ ಮೇಳಗನ್ನು ಪ್ರತಿ ಬುಧವಾರದಂದು ನಡೆಸುತ್ತಿರುವುದಾಗಿ ಸಭೆಗೆ ತಿಳಿಸಿದರು.

**3. ಬಿಬಿಎಂಪಿ ಅರಣ್ಯ ಇಲಾಖೆ:**

ವಾರ್ಡ್‌ನಲ್ಲಿರುವ ಕೆಲವೊಂದು ಮರಗಳ ರೆಂಬೆಗಳು ಬೀಳುವ ಹಂತದಲ್ಲಿದ್ದು, ಕೂಡಲೇ ಅದನ್ನು ತೆರವುಗೊಳಿಸಬೇಕೆಂದು ಹಿಂದೆ ಮನವಿ ಮಾಡಿದ್ದರೂ ತಾವುಗಳು ಯಾವುದೇ ಕ್ರಮವನ್ನು ಕೈಗೊಂಡಿರುವುದಿಲ್ಲ. ಇದು ಮಳೆಗಾಲವಾಗಿರುವುದರಿಂದ ಕೂಡಲೇ ಈ ಬಗ್ಗೆ ಕ್ರಮವಹಿಸಬೇಕು ಎಂದು ಅಧ್ಯಕ್ಷರು ಡಿಎಫ್‌ಒಗೆ ತಿಳಿಸಿದರು.

**4) ವಾರ್ಡ್ ಸಮಿತಿ ಸದಸ್ಯರು ಗೈರು ಹಾಜರಿ ಬಗ್ಗೆ:**

ವಾರ್ಡ್-37ರಲ್ಲಿ ನಡೆಸುವ ವಾರ್ಡ್ ಸಮಿತಿ ಸಭೆಗೆ ಕೆಲವೊಂದು ಇಲಾಖೆಯ ಅಧಿಕಾರಿಗಳು ಗೈರು ಹಾಜರಾಗುತ್ತಿದ್ದು, ಸಾರ್ವಜನಿಕರ ದೂರುಗಳನ್ನು ಚರ್ಚಿಸಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ ಮುಂದಿನ ಸಭೆಗೆ ತಾವುಗಳು ಗೈರು ಹಾಜರಾದಲ್ಲಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಅಧ್ಯಕ್ಷರು ಮತ್ತೊಮ್ಮೆ ತಿಳಿಸಿದರು.

**5) ಮಾಸ್ಕ್ ಹಾಕದಿರುವ ವ್ಯಕ್ತಿಗಳಿಗೆ ದಂಡ ವಿಧಿಸುವ ಬಗ್ಗೆ:-**

ಪ್ರಸ್ತಾಪಿತ ವಿಷಯದ ಬಗ್ಗೆ ಮಾರ್ಷಲ್‌ಗಳೊಂದಿಗೆ ಚರ್ಚಿಸಲಾಗಿದ್ದು, ಮಾಸ್ಕ್ ಹಾಕದೇ ತಿರುಗಾಡುವ ಸಾರ್ವಜನಿಕರಿಗೆ ದಂಡ ವಿಧಿಸಲು ರಾಜ್ಯ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಸುತ್ತೋಲೆ ಹೊರಡಿಸಿರುತ್ತದೆ. ಮಾರ್ಷಲ್‌ಗಳು ಅದರಂತೆ, ಕ್ರಮ ಕೈಗೊಂಡು ಮಾಸ್ಕ್ ಹಾಕದಿರುವ ಸಾರ್ವಜನಿಕರಿಗೆ ಸರ್ಕಾರದ ಆದೇಶದ ರೀತ್ಯಾ ಕಟ್ಟುನಿಟ್ಟಾಗಿ ದಂಡ ವಿಧಿಸಲು ಅಧ್ಯಕ್ಷರು ಸಭೆಯಲ್ಲಿ ತಿಳಿಸಿದರು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸಹಾಯಕ ಅಭಿಯಂತರರು ಹಾಗೂ
ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:37

(ಎನ್. ಜಿ. ರಮೇಶ್)
ಸ.ಕಾ.ನಿ.ಅ. ಹಾಗೂ
ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ:37

ಸಹಾಯಕ ಕಾರ್ಯಪಾಲಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ